Kannada - ಡೆಲಿವರೆನ್ಸ್ ಸ್ಕ್ರಿಪ್ಚರ್ಸ್ - Deliverance Scriptures

ಅರಣ್ಯಕಾಂಡ 10:35 ಇದ ಲ್ಲದೆ ಮಂಜೂಷವು ಹೊರಡುವಾಗ ಮೋಶೆಯುಕರ್ತನೇ, ಎದ್ದೇಳು, ನಿನ್ನ ಶತ್ರುಗಳು ಚದರಿಹೋಗಲಿ; ನಿನ್ನನ್ನು ಹಗೆಮಾಡುವವರು ನಿನ್ನ ಎದುರಿನಿಂದ ಓಡಿ ಹೋಗಲಿ ಎಂದು ಹೇಳಿದನು.

ಧರ್ಮೋಪದೇಶಕಾಂಡ 23:5 ಆದರೆ ನಿನ್ನ ದೇವರಾದ ಕರ್ತನು ಬಿಳಾಮನನ್ನು ಕೇಳಲೊಲ್ಲದೆ ಇದ್ದನು; ನಿನ್ನ ದೇವರಾದ ಕರ್ತನು ಆ ಶಾಪವನ್ನು ನಿನಗೆ ಆಶೀರ್ವಾದಕ್ಕೆ ತಿರುಗಿ ಸಿದನು; ಯಾಕಂದರೆ ನಿನ್ನ ದೇವರಾದ ಕರ್ತನು ನಿನ್ನನ್ನು ಪ್ರೀತಿಮಾಡಿದನು. (ನೆಹೆಮಿಯ 13:2)

ಕೀರ್ತನೆಗಳು 44:4 ಓ ದೇವರೇ, ನೀನೇ ನನ್ನ ಅರಸನು; ಯಾಕೋಬ ನಿಗೆ ಬಿಡುಗಡೆಗಳನ್ನು ಆಜ್ಞಾಪಿಸು.

ಯೆಶಾಯ 61:1 ದೇವರಾದ ಕರ್ತನ ಆತ್ಮವು ನನ್ನ ಮೇಲೆ ಅದೆ; ದೀನರಿಗೆ ಶುಭಸಮಾಚಾರವನ್ನು ಸಾರುವದಕ್ಕೆ ಕರ್ತನು ನನ್ನನ್ನು ಅಭಿಷೇಕಿಸಿದ್ದಾನೆ; ಮುರಿದ ಹೃದಯವುಳ್ಳವರನ್ನು ಕಟ್ಟುವದಕ್ಕೂ ಸೆರೆಯವರಿಗೆ ಬಿಡುಗಡೆಯನ್ನು ಬಂಧಿಸಲ್ಪಟ್ಟವರಿಗೆ ಸೆರೆಮನೆಯ ಕದ ತೆರೆಯುವದನ್ನು ಪ್ರಸಿದ್ಧಿ ಮಾಡುವದಕ್ಕೂ (ಲೂಕನು 4:18)

ಮತ್ತಾಯನು 6:13 ನಮ್ಮನ್ನು ಶೋಧನೆಯೊಳಗೆ ನಡಿಸದೆ ಕೇಡಿನಿಂದ ತಪ್ಪಿಸು. ಯಾಕಂದರೆ ರಾಜ್ಯವೂ ಬಲವೂ ಮಹಿಮೆಯೂ ಎಂದೆಂದಿಗೂ ನಿನ್ನವೇ. ಆಮೆನ್. (ಲೂಕನು 11:4)

ಮತ್ತಾಯನು 8:16 ಸಾಯಂಕಾಲವಾದಾಗ ದೆವ್ವಗಳು ಹಿಡಿದಿದ್ದ ಬಹಳ ಜನರನ್ನು ಅವರು ಆತನ ಬಳಿಗೆ ತಂದರು; ಮತ್ತು ಆತನು ತನ್ನ ಮಾತಿನಿಂದ ದೆವ್ವಗಳನ್ನು

ಬಿಡಿಸಿ ದ್ದಲ್ಲದೆ ಅಸ್ವಸ್ಥವಾಗಿದ್ದವರೆಲ್ಲರನ್ನೂ ಸ್ವಸ್ಥ ಮಾಡಿದನು.

ಮತ್ತಾಯನು 10:1 ಆತನು ತನ್ನ ಹನ್ನೆರಡು ಮಂದಿ ಶಿಷ್ಯರನ್ನು ತನ್ನ ಬಳಿಗೆ ಕರೆದು ಅಶುದ್ಧಾತ್ಮಗಳನ್ನು ಬಿಡಿಸುವಂತೆಯೂ ಎಲ್ಲಾ ತರವಾದ ರೋಗವನ್ನು ಮತ್ತು ಎಲ್ಲಾ ತರವಾದ ಅಸ್ವಸ್ಥತೆಯನ್ನು ಸ್ವಸ್ಥ ಮಾಡು ವಂತೆಯೂ ಅವರಿಗೆ ಅಧಿಕಾರ ಕೊಟ್ಟನು. (ಮಾರ್ಕನು 3:14,15)

ಮತ್ತಾಯನು 10:8 ರೋಗಿಗಳನ್ನು ಸ್ವಸ್ಥಮಾಡಿರಿ, ಕುಷ್ಠರೋಗಿಗಳನ್ನು ಶುದ್ಧಮಾಡಿರಿ, ಸತ್ತವರನ್ನು ಎಬ್ಬಿಸಿರಿ, ದೆವ್ವಗಳನ್ನು ಬಿಡಿಸಿರಿ; ನೀವು ಉಚಿತವಾಗಿ ಹೊಂದಿದ್ದೀರಿ, ಉಚಿತ ವಾಗಿ ಕೊಡಿರಿ.

ಮತ್ತಾಯನು 12:26-29 ಇದಲ್ಲದೆ ಸೈತಾನನು ಸೈತಾನನನ್ನು ಹೊರಗೆ ಹಾಕಿದರೆ ಅವನು ತನಗೆ ವಿರೋಧವಾಗಿ ತಾನೇ ವಿಭಾಗಿಸಲ್ಪಟ್ಟಿದ್ದಾನೆ; ಹಾಗಾದರೆ ಅವನ ರಾಜ್ಯವು ಹೇಗೆ ನಿಂತೀತು? 27 ಮತ್ತು ಬೆಲ್ಜೆಬೂಲನಿಂದ ನಾನು ದೆವ್ವಗಳನ್ನು ಬಿಡಿಸಿದರೆ ನಿಮ್ಮ ಮಕ್ಕಳು ಯಾರಿಂದ ಅವುಗಳನ್ನು ಬಿಡಿಸುತ್ತಾರೆ? ಆದದರಿಂದ ಅವರೇ ನಿಮಗೆ ನ್ಯಾಯತೀರಿಸುವರು. 28 ಆದರೆ ನಾನು ದೇವರ ಆತ್ಮನಿಂದ ದೆವ್ವಗಳನ್ನು ಬಿಡಿಸಿದರೆ ದೇವರ ರಾಜ್ಯವು ನಿಮ್ಮ ಬಳಿಗೆ ಬಂದಿದೆಯಲ್ಲಾ. 29 ಇಲ್ಲವೆ ಯಾವನಾದರೂ ಮೊದಲು ಬಲವುಳ್ಳ ಮನುಷ್ಯನನ್ನು ಕಟ್ಟಿಹಾಕದ ಹೊರತು ಅವನ ಮನೆ ಯನ್ನು ಪ್ರವೇಶಿಸಿ ಅವನ ಸೊತ್ತನ್ನು ಸುಲುಕೊಳ್ಳ ವದಕ್ಕಾದೀತೇ? ಕಟ್ಟಿದ ಮೇಲೆ ಅವನ ಮನೆಯನ್ನು ಸುಲುಕೊಳ್ಳುವದಕ್ಕಾಗುವದು. (ಮಾರ್ಕನು 3:23-27)

ಮತ್ತಾಯನು 12:43-45 ಅಶುದ್ಧಾತ್ಮವು ಒಬ್ಬ ಮನುಷ್ಯನಿಂದ ಹೊರಗೆ ಹೋದ ಮೇಲೆ ನೀರಿಲ್ಲದ ಸ್ಥಳಗಳಲ್ಲಿ ವಿಶ್ರಾಂತಿಗಾಗಿ ತಿರುಗಾಡಿದರೂ ಅದನ್ನು ಕಂಡುಕೊಳ್ಳಲಿಲ್ಲ. 44 ಆಗ ಅದು--ನಾನು ಹೊರಟುಬಂದ ನನ್ನ ಮನೆಗೆ ಹಿಂತಿರುಗುವೆನು ಎಂದು ಅಂದುಕೊಂಡು ಬಂದು ಅದು ಬರಿದಾಗಿಯೂ ಗುಡಿಸಿ

ಅಲಂಕರಿಸಲ್ಪಟ್ಟದ್ದಾ ಗಿಯೂ ಇರುವದನ್ನು ಕಂಡಿತು. 45 ತರುವಾಯ ಅದು ಹೋಗಿ ತನಗಿಂತ ಕೆಟ್ಟವುಗಳಾಗಿರುವ ಬೇರೆ ಏಳು ಆತ್ಮಗಳನ್ನು ಕರಕೊಂಡು ಅವು ಅದರೊಳಗೆ ಪ್ರವೇಶಿಸಿ ವಾಸಮಾಡುತ್ತವೆ; ಹೀಗೆ ಆ ಮನುಷ್ಯನ ಕಡೇ ಸ್ಥಿತಿಯು ಮೊದಲಿಗಿಂತಲೂ ಕೆಟ್ಟದ್ದಾಗಿರುವದು. ಅದರಂತೆಯೇ ಈ ಕೆಟ್ಟ ಸಂತತಿಗೂ ಆಗುವದು ಎಂದು ಹೇಳಿದನು.

ಮತ್ತಾಯನು 15:22,26,28 ಆಗ ಇಗೋ, ಕಾನಾನ್ಯಳಾದ ಒಬ್ಬ ಸ್ತ್ರೀಯು ಅದೇ ಪ್ರಾಂತ್ಯಗಳಿಂದ ಬಂದು ಆತನಿಗೆ--ಓ ಕರ್ತನೇ, ದಾವೀದನ ಕುಮಾ ರನೇ, ನನ್ನ ಮೇಲೆ ಕರುಣೆಯಿಡು; ನನ್ನ ಮಗಳು ದೆವ್ವದಿಂದ ಬಹಳವಾಗಿ ಸಂಕಟಪಡುತ್ತಿದ್ದಾಳೆ ಎಂದು ಕೂಗಿಕೊಂಡಳು. 26 ಆದರೆ ಆತನು ಪ್ರತ್ಯುತ್ತರವಾಗಿ--ಮಕ್ಕಳ ರೊಟ್ಟಿಯನ್ನು ತಕ್ಕೊಂಡು ನಾಯಿಗಳಿಗೆ ಹಾಕುವದು ಸರಿಯಲ್ಲ ಎಂದು ಹೇಳಿ ದನು. 28 ಆಗ ಯೇಸು ಪ್ರತ್ಯುತ್ತರವಾಗಿ ಆಕೆಗೆ--ಓ ಸ್ತ್ರೀಯೇ, ನಿನ್ನ ನಂಬಿಕೆಯು ದೊಡ್ಡದು; ನೀನು ಇಷ್ಟಪಟ್ಟಂತೆಯೇ ನಿನಗಾಗಲಿ ಎಂದು ಹೇಳಿ ದನು. ಮತ್ತು ಆಕೆಯ ಮಗಳು ಅದೇ ಗಳಿಗೆಯಲ್ಲಿ ಸ್ವಸ್ಥಳಾದಳು.

ಮತ್ತಾಯನು 16:19 ನಾನು ನಿನಗೆ ಪರಲೋಕ ರಾಜ್ಯದ ಬೀಗದ ಕೈಗಳನ್ನು ಕೊಡುತ್ತೇನೆ; ನೀನು ಯಾವದನ್ನು ಭೂಮಿಯ ಮೇಲೆ ಕಟ್ಟುತ್ತೀಯೋ ಅದು ಪರಲೋಕದಲ್ಲಿಯೂ ಕಟ್ಟಲ್ಪಡುವದು; ನೀನು ಯಾವ ದನ್ನು ಭೂಮಿಯ ಮೇಲೆ ಬಿಚ್ಚುತ್ತೀಯೋ ಅದು ಪರಲೋಕದಲ್ಲಿಯೂ ಬಿಚ್ಚಲ್ಪಡುವದು ಅಂದನು. (ಮತ್ತಾಯನು 18:18)

ಮತ್ತಾಯನು 17:19-21 ತರುವಾಯ ಶಿಷ್ಯರು ವಿಂಗಡವಾಗಿ ಯೇಸುವಿನ ಬಳಿಗೆ ಬಂದು--ಅದನ್ನು ಬಿಡಿಸುವದಕ್ಕೆ ನಮಗೆ ಯಾಕೆ ಆಗಲಿಲ್ಲ ಎಂದು ಕೇಳಿದರು. 20 ಯೇಸು ಅವರಿಗೆ--ನಿಮ್ಮ ಅಪನಂಬಿಕೆಯ ದೆಸೆಯಿಂದಲೇ; ನಾನು ನಿಮಗೆ

ನಿಜವಾಗಿ ಹೇಳುವದೇನಂದರೆ--ಸಾಸಿವೆ ಕಾಳಷ್ಟು ನಂಬಿಕೆ ನಿಮಗಿರುವದಾದರೆ ನೀವು ಈ ಬೆಟ್ಟಕ್ಕೆ--ಇಲ್ಲಿಂದ ಆ ಸ್ಥಳಕ್ಕೆ ಹೋಗು ಎಂದು ಹೇಳಿದರೆ ಅದು ಹೋಗುವದು; ಮತ್ತು ಯಾವದೂ ನಿಮಗೆ ಅಸಾಧ್ಯವಾಗಿರುವದಿಲ್ಲ. 21 ಪ್ರಾರ್ಥನೆ ಉಪವಾಸಗಳಿಂದಲ್ಲದೆ ಈ ತರವಾದದ್ದು ಹೊರಟು ಹೋಗುವದಿಲ್ಲ ಅಂದನು.

ಮಾರ್ಕನು 1:23-26 ಆಗ ಅವರ ಸಭಾಮಂದಿ ರದಲ್ಲಿ ಅಶುದ್ಧಾತ್ಮವಿದ್ದ ಒಬ್ಬ ಮನುಷ್ಯನಿದ್ದನು. 24 ಅವನು--ನಮ್ಮನ್ನು ಬಿಟ್ಟುಬಿಡು; ನಜರೇತಿನ ಯೇಸುವೇ, ನಮ್ಮಗೊಡವೆ ನಿನಗೇಕೆ? ನಮ್ಮನ್ನು ನಾಶಮಾಡುವದಕ್ಕಾಗಿ ನೀನು ಬಂದೆಯಾ? ನೀನು ಯಾರೆಂದು ನಾನು ಬಲ್ಲೆನು; ನೀನು ದೇವರ ಪರಿಶುದ್ಧನೇ ಎಂದು ಕೂಗಿ ಹೇಳಿದನು. 25 ಆಗ ಯೇಸು ಅವನನ್ನು ಗದರಿಸಿ--ಸುಮ್ಮನಿರು, ಅವನೊಳ ಗಿಂದ ಹೊರಗೆ ಬಾ ಅಂದನು. 26 ಆಗ ಅಶುದ್ಧಾತ್ಮವು ಅವನನ್ನು ಒದ್ದಾಡಿಸಿದ ಮೇಲೆ ಮಹಾಶಬ್ದದಿಂದ ಕೂಗಿ ಅವನೊಳಗಿಂದ ಹೊರಗೆ ಬಂದಿತು.

ಮಾರ್ಕನು 1:32-34 ಸಂಜೆಯಲ್ಲಿ ಸೂರ್ಯನು ಮುಣುಗಿದ್ದಾಗ ಅವರು ಅಸ್ವಸ್ಥತೆಯುಳ್ಳವರೆಲ್ಲರನ್ನೂ ದೆವ್ವ ಹಿಡಿದವರನ್ನೂ ಆತನ ಬಳಿಗೆ ತಂದರು. 33 ಆಗ ಪಟ್ಟಣವೆಲ್ಲಾ ಬಾಗಲ ಬಳಿಯಲ್ಲಿ ಒಟ್ಟಾಗಿ ಕೂಡಿಬಂದಿತು. 34 ಇದಲ್ಲದೆ ವಿಧವಿಧವಾದ ರೋಗ ಗಳಿಂದ ಅಸ್ವಸ್ಥರಾಗಿದ್ದ ಅನೇಕರನ್ನು ಆತನು ಸ್ವಸ್ಥಮಾಡಿ ಬಹಳ ದೆವ್ವಗಳನ್ನು ಬಿಡಿಸಿದನು; ಮತ್ತು ದೆವ್ವಗಳು ಆತನನ್ನು ಅರಿತಿದ್ದದರಿಂದ ಆತನು ಅವುಗಳಿಗೆ ಮಾತನಾಡಗೊಡಿಸಲಿಲ್ಲ.

ಮಾರ್ಕನು 1:39 ಮತ್ತು ಆತನು ಗಲಿಲಾಯದಲ್ಲೆಲ್ಲಾ ಅವರ ಸಭಾಮಂದಿರಗಳಲ್ಲಿ ಸಾರಿ ದೆವ್ವಗಳನ್ನು ಬಿಡಿಸಿದನು.

ಮಾರ್ಕನು 5:8 ಯಾಕಂದರೆ ಆತನು ಅವ ನಿಗೆ--ಅಶುದ್ಧಾತ್ಮವೇ, ಆ ಮನುಷ್ಯನೊಳಗಿನಿಂದ ಹೊರಗೆ ಬಾ ಎಂದು ಹೇಳಿದ್ದನು.

ಮಾರ್ಕನು 6:7,13 ಆತನು ಹನ್ನೆರಡು ಮಂದಿಯನ್ನು ತನ್ನ ಬಳಿಗೆ ಕರೆದು ಅವರಿಗೆ ಅಶುದ್ಧಾತ್ಮಗಳ ಮೇಲೆ ಅಧಿಕಾರ ಕೊಟ್ಟು ಇಬ್ಬಿಬ್ಬರನ್ನು ಕಳುಹಿಸಲಾರಂಭಿಸಿದನು. 13 ಅವರು ಅನೇಕ ದೆವ್ವಗಳನ್ನು ಬಿಡಿಸಿ ಬಹಳ ರೋಗಿಗಳಿಗೆ ಎಣ್ಣೆ ಹಚ್ಚಿ ಅವರನ್ನು ಸ್ವಸ್ಥಪಡಿಸಿದರು.

ಮಾರ್ಕನು 9:23-25 ಆಗ ಯೇಸು ಅವನಿಗೆ--ನೀನು ನಂಬುವದಾದರೆ ಆಗುವದು; ನಂಬುವವನಿಗೆ ಎಲ್ಲವು ಸಾಧ್ಯವೇ ಎಂದು ಹೇಳಿದನು. 24 ತಕ್ಷಣವೇ ಮಗುವಿನ ತಂದೆಯು--ಕರ್ತನೇ, ನಾನು ನಂಬು ತ್ತೇನೆ; ನನಗೆ ಅಪನಂಬಿಕೆ ಇಲ್ಲದಂತೆ ನೀನು ಸಹಾಯ ಮಾಡು ಎಂದು ಕಣ್ಣೀರಿನಿಂದ ಕೂಗಿ ಹೇಳಿದನು. 25 ಆಗ ಜನರು ಕೂಡಿಕೊಂಡು ಓಡಿ ಬರುವದನ್ನು ಯೇಸು ನೋಡಿ ಆ ಅಶುದ್ಧಾತ್ಮವನ್ನು ಗದರಿಸಿ ಅದಕ್ಕೆ --ಮೂಕ ಮತ್ತು ಕಿವುಡಾದ ಆತ್ಮವೇ, ನೀನು ಅವನೊಳಗಿಂದ ಹೊರಗೆ ಬಾ; ಇನ್ನೆಂದಿಗೂ ಅವ ನೊಳಗೆ ಸೇರದಿರು ಎಂದು ನಾನು ನಿನಗೆ ಖಂಡಿತವಾಗಿ ಹೇಳುತ್ತೇನೆ ಅಂದನು.

ಮಾರ್ಕನು 9:29 ಆತನು ಅವರಿಗೆ--ಈ ತರವಾ ದದ್ದು ಪ್ರಾರ್ಥನೆ ಉಪವಾಸಗಳಿಂದ ಹೊರತು ಬೇರೆ ಯಾವದರಿಂದಲೂ ಹೊರಗೆ ಬರಲಾರದು ಅಂದನು.

ಮಾರ್ಕನು 9:38,39 ಯೋಹಾನನು ಆತನಿಗೆ -- ಬೋಧಕನೇ, ನಮ್ಮನ್ನು ಹಿಂಬಾಲಿಸದವನೊಬ್ಬನು ನಿನ್ನ ಹೆಸರಿನಲ್ಲಿ ದೆವ್ವಗಳನ್ನು ಬಿಡಿಸುವದನ್ನು ನಾವು ನೋಡಿ ಅವನು ನಮ್ಮನ್ನು ಹಿಂಬಾಲಿಸುವವನಲ್ಲವಾದ್ದರಿಂದ ನಾವು ಅವನಿಗೆ ಅಡ್ಡಿಮಾಡಿದೆವು ಎಂದು ಹೇಳಿದನು. 39 ಆದರೆ ಯೇಸು--ಅವನಿಗೆ ಅಡ್ಡಿಮಾಡಬೇಡಿರಿ; ಯಾಕಂದರೆ ನನ್ನ ಹೆಸರಿನಲ್ಲಿ ಅದ್ಭುತಕಾರ್ಯವನ್ನು ಮಾಡಿ ನನ್ನ ವಿಷಯದಲ್ಲಿ ಹಗುರಾಗಿ ಕೆಟ್ಟದ್ದನ್ನು ಮಾತನಾಡುವ ಒಬ್ಬನಾದರೂ ಇಲ್ಲ.

ಮಾರ್ಕನು 16:17 ಇದಲ್ಲದೆ ನಂಬುವವರಿಂದ ಈ ಸೂಚಕಕಾರ್ಯಗಳು

ಉಂಟಾಗುವವು; ಅವರು ನನ್ನ ಹೆಸರಿನಲ್ಲಿ ದೆವ್ವಗಳನ್ನು ಬಿಡಿಸುವರು; ಅವರು ಹೊಸ ಭಾಷೆಗಳಲ್ಲಿ ಮಾತನಾಡುವರು;

ಲೂಕನು 4:34-36 ನಮ್ಮನ್ನು ಬಿಟ್ಟು ಬಿಡು; ನಜರೇತಿನ ಯೇಸುವೇ, ನಮ್ಮಗೊಡವೆ ನಿನಗೆ ಯಾಕೆ? ನಮ್ಮನ್ನು ನಾಶಮಾಡುವದಕ್ಕಾಗಿ ನೀನು ಬಂದೆಯಾ? ನೀನು ಯಾರೆಂದು ನಾನು ಬಲ್ಲೆನು; ನೀನು ದೇವರ ಪರಿಶುದ್ಧನು ಎಂದು ಹೇಳಿದನು. 35 ಆಗ ಯೇಸು ಅವನನ್ನು ಗದರಿಸಿ--ಸುಮ್ಮನಿರು, ಅವನೊಳಗಿಂದ ಹೊರಗೆ ಬಾ ಅಂದನು. ಆ ದೆವ್ವವು ಅವನನ್ನು ಮಧ್ಯದಲ್ಲಿ ಕೆಡವಿ ಅವನನ್ನು ಬಾಧಿಸದೆ ಅವನೊಳಗಿಂದ ಹೊರಗೆ ಬಂತು. 36 ಆಗ ಅವರೆ ಲ್ಲರೂ ಬೆರಗಾಗಿ--ಇದೆಂಥ ಮಾತಾಗಿದೆ! ಈತನು ಅಧಿಕಾರದಿಂದಲೂ ಬಲದಿಂದಲೂ ಅಶುದ್ಧಾತ್ಮಗಳಿಗೆ ಅಪ್ಪಣೆ ಕೊಡಲು ಅವು ಹೊರಗೆ ಬರುತ್ತವಲ್ಲಾ ಎಂದು ತಮ್ಮ ತಮ್ಮೊಳಗೆ ಮಾತನಾಡಿಕೊಂಡರು.

ಲೂಕನು 4:41 ಅನೇಕರೊಳಗಿಂದ ದೆವ್ವಗಳು ಸಹ ಹೊರಗೆ ಬಂದು ಕೂಗುತ್ತಾ--ನೀನು ದೇವಕುಮಾರನಾದ ಕ್ರಿಸ್ತನೇ ಎಂದು ಹೇಳಿದವು. ಆತನು ಅವುಗಳನ್ನು ಗದರಿಸಿ ಮಾತನಾಡಬಾರದೆಂದು ಹೇಳಿದನು. ಯಾಕಂದರೆ ಆತನು ಕ್ರಿಸ್ತನೆಂದು ಅವುಗಳಿಗೆ ಗೊತ್ತಿತ್ತು.

ಲೂಕನು 7:21 ಅದೇಗಳಿಗೆಯಲ್ಲಿ ರೋಗ ಗಳಿಂದಲೂ ವ್ಯಾಧಿಗಳಿಂದಲೂ ದುರಾತ್ಮಗಳಿಂದಲೂ ಪೀಡಿತರಾದ ಅನೇಕರನ್ನು ಆತನು ಗುಣಪಡಿಸಿದನು; ಕುರುಡರಾದ ಅನೇಕರಿಗೆ ದೃಷ್ಟಿಕೊಟ್ಟನು.

ಲೂಕನು 8:29 (ಯಾಕಂದರೆ ಆ ಅಶುದ್ಧಾತ್ಮವು ಅವನಿಂದ ಹೊರಗೆ ಬರಬೇಕೆಂದು ಆತನು ಅಪ್ಪಣೆ ಕೊಟ್ಟಿದ್ದನು. ಅದು ಬಹಳ ಸಾರಿ ಅವನನ್ನು ಹಿಡಿಯುತ್ತಿ ದ್ದದರಿಂದ ಅವನು ಸರಪಣಿಗಳಿಂದಲೂ ಬೇಡಿಗಳಿಂ ದಲೂ ಕಟ್ಟಲ್ಪಡುತ್ತಿದ್ದರೂ ಅವನು ಆ

ಬಂಧನಗಳನ್ನು ಮುರಿದುಬಿಡುತ್ತಿದ್ದನು ಮತ್ತು ದೆವ್ವವು ಅವನನ್ನು ಅ

ಲೂಕನು 9:40 ಅದನ್ನು ಬಿಡಿಸುವಂತೆ ನಾನು ನಿನ್ನ ಶಿಷ್ಯರನ್ನು ಬೇಡಿಕೊಂಡೆನು; ಆದರೆ ಅದು ಅವರಿಂದ ಆಗಲಿಲ್ಲ ಅಂದನು.

ಲೂಕನು 10:17-20 ತರುವಾಯ ಆ ಎಪ್ಪತ್ತು ಮಂದಿ ಸಂತೋಷದಿಂದ ಹಿಂತಿರುಗಿ--ಕರ್ತನೇ, ನಿನ್ನ ಹೆಸರಿನಲ್ಲಿ ದೆವ್ವಗಳು ಸಹ ನಮಗೆ ಅಧೀನವಾದವು ಅಂದರು. 18 ಆಗ ಆತನು ಅವರಿಗೆ--ಸೈತಾನನು ಮಿಂಚಿನ ಹಾಗೆ ಆಕಾಶದಿಂದ ಬೀಳುವದನ್ನು ನಾನು ನೋಡಿದೆನು. 19 ಇಗೋ, ಸರ್ಪಗಳನ್ನೂ ಚೇಳುಗಳನ್ನೂ ತುಳಿಯುವದಕ್ಕೆ ಮತ್ತು ವಿರೋಧಿಯ ಎಲ್ಲಾ ಶಕ್ತಿಯ ಮೇಲೆ ನಾನು ನಿಮಗೆ ಅಧಿಕಾರ ಕೊಡುತ್ತೇನೆ; ಯಾವದೂ ಯಾವ ರೀತಿಯಲ್ಲಿಯೂ ನಿಮಗೆ ಕೇಡು ಮಾಡ ಲಾರದು. 20 ಆದಾಗ್ಯೂ ದುರಾತ್ಮಗಳು ನಿಮಗೆ ಅಧೀನವಾದವೆಂದು ಸಂತೋಷಪಡಬೇಡಿರಿ; ಆದರೆ ನಿಮ್ಮ ಹೆಸರುಗಳು ಪರಲೋಕದಲ್ಲಿ ಬರೆಯಲ್ಪಟ್ಟಿರು ವದರಿಂದಲೇ ಸಂತೋಷಿಸಿರಿ ಅಂದನು.

ಲೂಕನು 11:14 ತರುವಾಯ ಆತನು ಒಂದು ಮೂಕದೆವ್ವವನ್ನು ಹೊರಡಿಸುತ್ತಿರುವಾಗ ಆದದ್ದೇನಂದರೆ, ಆ ದೆವ್ವವು ಹೊರಟು ಹೋದ ಮೇಲೆ ಆ ಮೂಕನು ಮಾತನಾಡಿ ದನು; ಅದಕ್ಕೆ ಜನರು ಆಶ್ಚರ್ಯಪಟ್ಟರು.

ಲೂಕನು 11:20-22 ಆದರೆ ನಾನು ದೇವರ ಹಸ್ತದಿಂದಲೇ ದೆವ್ವಗಳನ್ನು ಹೊರಡಿಸುವದಾದರೆ ದೇವರ ರಾಜ್ಯವು ನಿಸ್ಸಂದೇಹವಾಗಿ ನಿಮ್ಮ ಬಳಿಗೆ ಬಂದಿದೆಯಲ್ಲಾ. 21 ಆಯುಧ ಗಳನ್ನು ಧರಿಸಿಕೊಂಡು ಬಲಿಷ್ಠನಾದವನೊಬ್ಬನು ತನ್ನ ಅರಮನೆಯನ್ನು ಕಾಯುವದಾದರೆ ಅವನ ಸೊತ್ತು ಸುರಕ್ಷಿತವಾಗಿರುವದು. 22 ಆದರೆ ಅವನಿಗಿಂತ ಬಲಿ ಷ್ಠನು ಅವನ ಮೇಲೆ ಬಂದು ಅವನನ್ನು ಜಯಿಸಿ ಅವನು ನಂಬಿಕೊಂಡಿದ್ದ ಆಯುಧಗಳನ್ನು ಅವನಿಂದ ತಕ್ಕೊಂಡು ತನ್ನ

ಸುಲಿಗೆಗಳನ್ನು ಹಂಚುವನು.

ಲೂಕನು 13:32 ಅದಕ್ಕೆ ಆತನು ಅವರಿಗೆ--ಇಗೋ, ನಾನು ಈ ದಿವಸ ಮತ್ತು ನಾಳೆ ದೆವ್ವಗಳನ್ನು ಬಿಡಿಸಿ ಸ್ವಸ್ಥಮಾಡುತ್ತೇನೆ; ಮೂರನೆಯ ದಿನದಲ್ಲಿ ನಾನು ಸಿದ್ಧಿಗೆ ಬರುತ್ತೇನೆ ಎಂದು ನೀವು ಹೋಗಿ ಆ ನರಿಗೆ ಹೇಳಿರಿ.

ಯೋಹಾನನು 14:12 ನಾನು ನಿಮಗೆ ನಿಜನಿಜವಾಗಿ ಹೇಳುತ್ತೇನೆ--ನನ್ನನ್ನು ನಂಬುವವನು ನಾನು ಮಾಡುವ ಕ್ರಿಯೆ ಗಳನ್ನು ಸಹ ಮಾಡುವನು; ಇವುಗಳಿಗಿಂತ ಮಹತ್ತಾದ ಕ್ರಿಯೆಗಳನ್ನು ಅವನು ಮಾಡುವನು; ಯಾಕಂದರೆ ನಾನು ನನ್ನ ತಂದೆಯ ಬಳಿಗೆ ಹೋಗುತ್ತೇನೆ.

ಯೋಹಾನನು 17:15 ನೀನು ಅವರನ್ನು ಲೋಕದೊಳಗಿಂದ ತೆಗೆಯಬೇಕೆಂತಲ್ಲ; ಅವರನ್ನು ಕೇಡಿನಿಂದ ಕಾಪಾಡಬೇಕೆಂದು ನಾನು ಕೇಳಿಕೊಳ್ಳು ತ್ತೇನೆ.

ಅಪೊಸ್ತಲರ ಕೃತ್ಯಗ 10:38 ದೇವರು ನಜರೇತಿನ ಯೇಸುವನ್ನು ಪವಿತ್ರಾತ್ಮನಿಂದಲೂ ಬಲದಿಂದಲೂ ಅಭಿಷೇಕಿಸಿದ ನೆಂಬದನ್ನೂ ಹೇಗೆ ಆತನು ಒಳ್ಳೇದನ್ನು ಮಾಡುತ್ತಾ ಸೈತಾನನಿಂದ ಬಾಧಿಸಲ್ಪಡುತ್ತಿರುವವರೆಲ್ಲರನ್ನು ಗುಣ ಮಾಡುತ್ತಾ ಸಂಚರಿಸಿದನೆಂಬದನ್ನು ನೀವು ತಿಳಿದಿದ್ದೀರಿ; ಯಾಕಂದರೆ ದೇವರು ಆತನ ಸಂಗಡ ಇದ್ದನು.

ಅಪೊಸ್ತಲರ ಕೃತ್ಯಗ 16:17,18 ಈಕೆಯು ಪೌಲನನ್ನೂ ನಮ್ಮನ್ನೂ ಹಿಂಬಾಲಿಸಿ--ಇವರು ನಮಗೆ ರಕ್ಷಣೆಯ ಮಾರ್ಗವನ್ನು ತೋರಿಸುವ ಮಹೋನ್ನತ ನಾದ ದೇವರ ಸೇವಕರು ಎಂದು ಕೂಗಿ ಹೇಳುತ್ತಿದ್ದಳು. 18 ಹೀಗೆ ಅವಳು ಅನೇಕ ದಿವಸ ಮಾಡಿದ್ದರಿಂದ ಪೌಲನು ಬಹಳವಾಗಿ ವ್ಯಥೆಪಟ್ಟು ಹಿಂತಿರುಗಿ ಆ ದೆವ್ವಕ್ಕೆ--ಅವಳನ್ನು ಬಿಟ್ಟು ಹೋಗು ಎಂದು ಯೇಸು ಕ್ರಿಸ್ತನ ಹೆಸರಿನಲ್ಲಿ ನಿನಗೆ ಅಪ್ಪಣೆ ಕೊಡುತ್ತೇನೆ ಎಂದು ಹೇಳಿದನು. ಅದೇ ಗಳಿಗೆಯಲ್ಲಿ ಅದು ಬಿಟ್ಟು ಹೋಯಿತು.

ಅಪೊಸ್ತಲರ ಕೃತ್ಯಗ 19:11,12 ದೇವರು ಪೌಲನ ಕೈಯಿಂದ ವಿಶೇಷವಾದ ಮಹತ್ಕಾರ್ಯಗಳನ್ನು ನಡಿಸುತ್ತಾ ಇದ್ದದರಿಂದ 12 ಜನರು ಅವನ ಮೈಮೇಲಿನಿಂದ ಕೈವಸ್ತ್ರಗಳನ್ನೂ ಉಡಿವಸ್ತ್ರಗಳನ್ನೂ ತಂದು ರೋಗಿಗಳ ಮೇಲೆ ಹಾಕಲು ಅವರವರ ರೋಗಗಳು ವಾಸಿಯಾದವು, ದೆವ್ವಗಳೂ ಬಿಟ್ಟುಹೋದವು.

ಅಪೊಸ್ತಲರ ಕೃತ್ಯಗ 26:15-18 ಅದಕ್ಕೆ ನಾನು--ಕರ್ತನೇ, ನೀನು ಯಾರು ಎಂದು ಕೇಳಿದೆನು. ಆಗ ಆತನು--ನೀನು ಹಿಂಸೆಪಡಿಸುವ ಯೇಸುವೇ ನಾನು. 16 ಆದರೆ ನೀನು ಎದ್ದು ನಿಂತುಕೋ; ನೀನು ನೋಡಿದವುಗಳ ಮತ್ತು ನಾನು ನಿನಗೆ ಪ್ರತ್ಯಕ್ಷವಾಗಿ ತಿಳಿಯಪಡಿಸುವವುಗಳ ವಿಷಯವಾಗಿ ನಿನ್ನನ್ನು ಸೇವಕನನ್ನಾಗಿಯೂ ಸಾಕ್ಷಿಯನ್ನಾಗಿಯೂ ಮಾತ್ರ ವಲ್ಲದೆ 17 ಈ ಜನರಿಂದ ಮತ್ತು ಈಗ ನಾನು ನಿನ್ನನ್ನು ಕಳುಹಿಸುವ ಅನ್ಯಜನರಿಂದ ನಿನ್ನನ್ನು ಬಿಡಿಸುವದಕ್ಕೂ 18 ಅವರ ಕಣ್ಣುಗಳನ್ನು ತೆರೆಯುವದಕ್ಕೂ ಮತ್ತು ಕತ್ತಲೆಯಿಂದ ಬೆಳಕಿಗೂ ಸೈತಾನನ ಅಧಿಕಾರದಿಂದ ದೇವರ ಕಡೆಗೆ ಅವರನ್ನು ತಿರುಗಿಸುವದಕ್ಕೂ ಅವರು ನನ್ನಲ್ಲಿ ಇಡುವ ನಂಬಿಕೆಯಿಂದಾಗುವ ಪಾಪಕ್ಷಮಾ ಪಣೆಯನ್ನೂ ಪವಿತ್ರರಾದವರಲ್ಲಿ ಸ್ವಾಸ್ಥ್ಯವನ್ನೂ ಹೊಂದುವಂತೆ ಮಾಡುವದಕ್ಕಾಗಿ ನಾನು

ರೋಮಾಪುರದವರಿಗೆ 16:20 ಶಾಂತಿದಾಯಕನಾದ ದೇವರು ಶೀಘ್ರವಾಗಿ ಸೈತಾನನನ್ನು ನಿಮ್ಮ ಪಾದಗಳ ಕೆಳಗೆ ತುಳಿದುಬಿಡುವನು. ನಮ್ಮ ಕರ್ತನಾದ ಯೇಸು ಕ್ರಿಸ್ತನ ಕೃಪೆಯು ನಿಮ್ಮೊಂದಿಗಿರಲಿ. ಆಮೆನ್.

2 ಕೊರಿಂಥದವರಿಗೆ 2:11 ಸೈತಾನನಿಗೆ ನಮ್ಮ ವಿಷಯದಲ್ಲಿ ಎಡೆ ಸಿಕ್ಕಬಾರದು; ಅವನ ಕುತಂತ್ರಗಳನ್ನು ನಾವು ಅರಿಯದವರಲ್ಲವಲ್ಲಾ.

ಗಲಾತ್ಯದವರಿಗೆ 1:4 ಈತನು ನಮ್ಮನ್ನು ಕೆಟ್ಟದ್ದಾಗಿರುವ ಈಗಿನ ಪ್ರಪಂಚದೊಳಗಿಂದ ಬಿಡಿಸಬೇಕೆಂದು ನಮ್ಮ ತಂದೆ ಯಾದ ದೇವರ ಚಿತ್ತಕ್ಕನುಸಾರವಾಗಿ ನಮ್ಮ

ಪಾಪಗಳಿಗೋಸ್ಕರ ತನ್ನನ್ನು ತಾನೇ ಒಪ್ಪಿಸಿದನು.

ಎಫೆಸದವರಿಗೆ 4:27 ಸೈತಾನನಿಗೆ ಅವಕಾಶ ಕೊಡಲೇಬೇಡಿರಿ.

ಎಫೆಸದವರಿಗೆ 6:11 ನೀವು ಸೈತಾನನ ತಂತ್ರೋಪಾಯಗಳನ್ನು ಎದುರಿಸಿ ನಿಲ್ಲುವದಕ್ಕೆ ಶಕ್ತರಾಗುವಂತೆ ದೇವರ ಸರ್ವಾಯುಧ ಗಳನ್ನು ಧರಿಸಿಕೊಳ್ಳಿರಿ.

2 ಥೆಸಲೊನೀಕದವರಿಗೆ 3:2,3 ಮೂರ್ಖರಾದ ದುಷ್ಟಜನರ ಕೈಯಿಂದ ನಾವು ತಪ್ಪಿಸಲ್ಪಡುವ ಹಾಗೆಯೂ ಪ್ರಾರ್ಥಿಸಿರಿ; ಯಾಕಂದರೆ ಎಲ್ಲರಲ್ಲಿ ನಂಬಿಕೆ ಯಿಲ್ಲವಲ್ಲಾ. 3 ಆದರೆ ಕರ್ತನು ನಂಬಿಗಸ್ತನು; ಆತನು ನಿಮ್ಮನ್ನು ದೃಢಪಡಿಸಿ ನಿಮ್ಮನ್ನು ಕೇಡಿನಿಂದ ತಪ್ಪಿಸುವನು.

2 ತಿಮೊಥೆಯನಿಗೆ 2:26 ಸೈತಾ ನನ ಉರ್ಲಿಗೆ ಬಿದ್ದು ಅವನ ಇಷ್ಟದಿಂದ ಸೆರೆ ಒಯ್ಯಲ್ಪಟ್ಟವರಾದ ಇವರು ಒಂದು ವೇಳೆ ಎಚ್ಚೆತ್ತಾರು.

2 ತಿಮೊಥೆಯನಿಗೆ 4:18 ನನ್ನನ್ನು ಪ್ರತಿಯೊಂದು ದುಷ್ಕೃತ್ಯದಿಂದ ಕರ್ತನು ತಪ್ಪಿಸಿ ತನ್ನ ಪರಲೋಕರಾಜ್ಯಕ್ಕೆ ನನ್ನನ್ನು ಕಾಪಾಡು ವನು.
ಯುಗಯುಗಾಂತರಗಳಲ್ಲಿಯೂ ಆತನಿಗೆ ಮಹಿಮೆ. ಆಮೆನ್.

1 ಪೇತ್ರನು 5:8 ಸ್ವಸ್ಥಚಿತ್ತರಾಗಿರ್ರಿ. ಎಚ್ಚರವಾಗಿರ್ರಿ; ನಿಮ್ಮ ವಿರೋಧಿ ಯಾಗಿರುವ ಸೈತಾನನು ಗರ್ಜಿಸುವ ಸಿಂಹದಂತೆ ಯಾರನ್ನು ನುಂಗಲಿ ಎಂದು ಹುಡುಕುತ್ತಾ ತಿರುಗುತ್ತಾನೆ.

1 ಯೋಹಾನನು 4:4 ಚಿಕ್ಕಮಕ್ಕಳೇ, ನೀವು ದೇವರಿಗೆ ಸಂಬಂಧಪಟ್ಟವರಾ ಗಿದ್ದೀರಿ. ಅವರನ್ನು ಜಯಿಸಿದ್ದೀರಿ. ನಿಮ್ಮಲ್ಲಿರುವಾತನು ಲೋಕದಲ್ಲಿ ಇರುವವನಿಗಿಂತ ದೊಡ್ಡವನಾಗಿದ್ದಾನೆ.